# <u>ಕರ್ನಾಟಕ ಲೋಕಾಯುಕ್ತ</u>

ನಂ.ಕಂಪ್ಲೆಂಟ್/ಉಪಲೋಕ್/ಎಂವೈಎಸ್-6942/2014/ಪಿಪಿ

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀಧಿ,
ಬೆಂಗಳೂರು.
ದಿನಾಂಕ : 03/03/2017

## <u>ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(1) ರನ್ವಯ ವರದಿ</u>

**ವಿಷಯ:** ಶ್ರೀ ಸುಂದರ ಭಂಡಾರಿ, ಮುಂಡ್ಕೂರು ಗ್ರಾಮ, ಕಾರ್ಕಳ ತಾಲ್ಲೂಕು, ಉಡುಪಿ ಜಿಲ್ಲೆ ಇವರು ಈ ಸಂಸ್ಥೆಗೆ ಸಲ್ಲಿಸಿದ ದೂರಿನನ್ವಯ ಕಾನೂನು ರೀತ್ಯ ಕ್ರಮ ಜರುಗಿಸಿ ವರದಿ ಸಲ್ಲಿಸುವ ಬಗ್ಗೆ.

*-*-*

ಪ್ರಕರಣದ ದೂರುದಾರರಾದ ಶ್ರೀ ಸುಂದರ ಭಂಡಾರಿ ಇವರು ಈ ಸಂಸ್ಥೆಗೆ ದೂರೊಂದನ್ನು ಸಲ್ಲಿಸಿ, ಕರ್ನಾಟಕ ಭೂ ನ್ಯಾಯ ಮಂಡಳಿಯಲ್ಲಿ ಹಾಗೂ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ನೀಡಿದ ತೀರ್ಪಿನನ್ವಯ ಕಾರ್ಕಳ ತಾಲ್ಲೂಕಿನ ಮುಂಡ್ಕೂರು ಗ್ರಾಮದ ಸರ್ವೇ ನಂಬರ್ 170/1ಪಿ2 ರಲ್ಲಿನ ಜಮೀನು ತನ್ನ ಪರವಾಗಿದ್ದು, ಅಲ್ಲಿ ಮನೆ ಕಟ್ಟಲು ಪರವಾನಗೆಯನ್ನು ಕೋರಿ ಪಂಚಾಯತಿಗೆ ಅರ್ಜಿ ಸಲ್ಲಿಸಿದ್ದು, ಅವರು ನೀಡಿರುವ ಪರವಾನಗಿಯಂತೆ ಮನೆ ಕಟ್ಟಿದ್ದು, ಮನೆಗೆ ವಿದ್ಯುತ್ ಸಂಪರ್ಕ ಪಡೆಯಲು ನಿರಾಕ್ಷೇಪಣಾ ಪತ್ರ ಕೋರಿ ಹಾಗೂ ಮನೆ ಡೋರ್ ನಂಬರ್ ನೀಡಲು ಕೋರಿ ಗ್ರಾಮ ಪಂಚಾಯತಿಯವರಿಗೆ ಅರ್ಜಿ ಸಲ್ಲಿಸಿದ್ದು, ಅದನ್ನು ನೀಡದೇ ದೂರುದಾರರು ಸಲ್ಲಿಸಿದ್ದ ರಿಟ್ ಅರ್ಜಿಯ ಎದುರುದಾರರಾದ ಶ್ರೀಮತಿ ನರ್ಸು ಶೆಡ್ತಿ ರವರೊಡನೆ ಶಾಮೀಲಾಗಿ ಮನೆಗೆ ಡೋರ್ ನಂಬರ್ ನೀಡದೇ ಹಾಗೂ ವಿದ್ಯುತ್ ಸಂಪರ್ಕ ಪಡೆಯಲು ನಿರಾಕ್ಷೇಪಣ ಪತ್ರ ನೀಡದೇ ಸತಾಯಿಸುತ್ತಿರುತ್ತಾರೆ. ಆದ್ದರಿಂದ, ಎದುರುದಾರರ ವಿರುದ್ಧ ಕ್ರಮ ಜರಿಗಿಸಿ ತನಗೆ ತನ್ನ ತೊಂದರೆ ನಿವಾರಿಸಿಕೊಡಬೇಕೆಂದು ಕೋರಿರುತ್ತಾರೆ. ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 9 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆಗೆ ಆದೇಶಿಸಲಾಗಿರುತ್ತದೆ.

2. ಸದರಿ ದೂರಿನ ಆಧಾರದ ಮೇಲೆ ಎದುರುದಾರರ ಆಕ್ಷೇಪಣೆಯನ್ನು ಕರೆಯಲಾಗಿದ್ದು, ಎದುರುದಾರರು ತಮ್ಮ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲ. ಆದರೆ, ಎದುರುದಾರರಿಗೆ ಕಳುಹಿಸಲಾಗಿದ್ದ

ನೋಟೀಸ್‌ನ ಪತ್ರದ ಸ್ವೀಕೃತಿಯನ್ನು ಸ್ವೀಕರಿಸಲಾಗಿದೆ. ಆದ್ದರಿಂದ, ಎದುರುದಾರರ ಆಕ್ಷೇಪಣೆ ಏನು ಇಲ್ಲವೆಂದು ಪರಿಗಣಿಸಲಾಗಿದೆ.

3. ದೂರಿನಂಶಗಳನ್ನು ಹಾಗೂ ಹಾಜರುಪಡಿಸಿರುವ ದಾಖಲೆಗಳನ್ನು ಪರಿಶೀಲಿಸಿದಲ್ಲಿ, ದೂರುದಾರರು ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿಯನ್ನು ಸಲ್ಲಿಸಿದ್ದು, ಸದರಿ ರಿಟ್ ಅರ್ಜಿ ಸಂ:26937/1998ರಲ್ಲಿ ಮಾನ್ಯ ಉಚ್ಛ ನ್ಯಾಯಾಲಯವು ತೀರ್ಪನ್ನು ನೀಡಿ ಅದರಲ್ಲಿ "By the second order – Annexure –B, the Land Tribunal has reduced the extent of land granted to the petitioner by the land tribunal under the orders – Annexure-A and granted excess land to the 3rd respondent. It is seen from the impugned order Annexure-B that the tribunal has granted some portion of the lands in question in favour of respondent no.3, it appears respondent no.3 had also filed an application on the basis of which the land tribunal has passed the impugned order Annexure –B, after clubbing several applications including the application of respondent no.3" ಎಂದು ತೀರ್ಪಿನಲ್ಲಿ ಚರ್ಚಿಸಿರುವುದು ಕಂಡು ಬಂದಿರುತ್ತದೆ. ಸದರಿ ತೀರ್ಪಿನಲ್ಲಿ ಮುಂದುವರೆದು, 7ನೇ ಪ್ಯಾರಾದಲ್ಲಿ "In the circumstance, the order Annexure-B is quashed so far as it pertains to the lands in question granted to respondent no.3. The tribunal is directed to find out whether respondent no.3 also filed the application in form no.7 in respect of the lands in question after the order was passed by the land tribunal in favour of the petitioner, but if so, the Tribunal is directed to dispose off the case in the light of the divisional bench judgement of this Court in Basappa Gurusangappa's case" ಎಂದು ತಿಳಿಸಿರುತ್ತಾರೆ. ಆದ್ದರಿಂದ, ಸದರಿ ರಿಟ್ ಅರ್ಜಿಯ ಆದೇಶದಂತೆ ಕರ್ನಾಟಕ ಮೇಲ್ಮನವಿ ಪ್ರಾಧಿಕಾರದಲ್ಲಿ ಸದರಿ ಜಮೀನಿಗೆ ಸಂಬಂಧಿಸಿದಂತೆ, ಸದರಿ ಮೇಲ್ಮನವಿ ಪ್ರಾಧಿಕಾರವು ತೀರ್ಪನ್ನು ನೀಡಬೇಕಾಗಿತ್ತೆಂದು ಸ್ಪಷ್ಟ ಪಡುತ್ತದೆ. ಹಾಜರುಪಡಿಸಿರುವ ದಾಖಲೆಗಳಲ್ಲಿ ಮುಂಡ್ಕೂರು ಗ್ರಾಮದ ಸರ್ವೇ ನಂಬರ್ 170/1ಪಿಪಿ2 ನಲ್ಲಿನ 863 ಚದರ ಅಡಿ ಜಾಗದಲ್ಲಿ ಮನೆ ಕಟ್ಟಿಸಲು ಪರವಾನಗೆಯನ್ನು ನೀಡಿರುವುದು ಸ್ಪಷ್ಟ ಪಡುತ್ತದೆ. ಸದರಿ ಪರವಾನಗೆ ಪ್ರತಿಯನ್ನು ಹಾಜರುಪಡಿಸಲಾಗಿದೆ. ಸದರಿ ಪರವಾನಗೆಯನ್ನು ಪರಿಶೀಲಿಸಿದಲ್ಲಿ ಶ್ರೀ ಸುಂದರ್ ಭಂಡಾರಿ ತಂದೆ ಮುತ್ತು ಭಂಡಾರಿ ಇವರಿಗೆ (ದೂರುದಾರರಿಗೆ) ಸದರಿ ಪರವಾನಗೆಯನ್ನು ನೀಡಿರುವುದು

ಕಂಡು ಬರುತ್ತದೆ. ದೂರುದಾರರು ತಾವು ಕಟ್ಟಿರುವ ಮನೆಗೆ ಡೋರ್ ನಂಬರ್ ನೀಡುವಂತೆ ಹಾಗೂ ವಿದ್ಯುಚ್ಛಕ್ತಿ ಸಂಪರ್ಕ ಪಡೆಯಲು ನಿರಾಕ್ಷೇಪಣಾ ಪತ್ರ ನೀಡುವಂತೆ ಕೋರಿ ಅರ್ಜಿಯನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರಿಗೆ ಸಲ್ಲಿಸಿದ್ದು, ಅದನ್ನು ಹಾಜರುಪಡಿಸಲಾಗಿದೆ. ಆದರೆ, ಈ ಅರ್ಜಿಗೆ ಸಂಬಂಧಿಸಿದಂತೆ ದೂರುದಾರರಿಗೆ ಪಂಚಾಯತಿ ವತಿಯಿಂದ ಯಾವುದೇ ಹಿಂಬರಹವನ್ನು ನೀಡಿರುವುದು ಕಂಡು ಬರುವುದಿಲ್ಲ ಮತ್ತು ಎದುರುದಾರರಿಗೆ ಈ ಪ್ರಕರಣದಲ್ಲಿ ಆಕ್ಷೇಪಣೆಯನ್ನು ಸಲ್ಲಿಸುವಂತೆ ತಿಳಿಸಿ ನೋಟೀಸ್ ನೀಡಲಾಗಿದ್ದು, ಸದರಿ ನೋಟೀಸ್ ಅವರಿಗೆ ಜಾರಿಯಾಗಿದ್ದರೂ ಸಹ, ಎದುರುದಾರರು ಯವುದೇ ಉತ್ತರ ಸಲ್ಲಿಸಿರುವುದಿಲ್ಲ. ಆದ್ದರಿಂದ, ಇವರ ಆಕ್ಷೇಪಣೆ ಏನು ಇಲ್ಲವೆಂದು ಪರಿಗಣಿಸಲಾಗಿದೆ. ಈ ಹಿನ್ನೆಲೆಯಲ್ಲಿ ದೂರುದಾರರು ಮಾಡಿರುವ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿರುವುದು ಕಂಡು ಬರುತ್ತದೆ.

4. ಮೇಲೆ ಚರ್ಚಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ, 12(1)ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, **ಕಾರ್ಕಳ ತಾಲ್ಲೂಕಿನ ಮುಂಡ್ಕೂರು ಗ್ರಾಮದ ಸರ್ವೇ ನಂಬರ್ 170/1ಪಿ2 ರ ಜಮೀನಿನಲ್ಲಿ ದೂರುದಾರರು ಕಟ್ಟಿರುವ ಮನೆಗೆ ಡೋರ್ ನಂಬರ್ ನೀಡುವಂತೆ ಮತ್ತು ವಿದ್ಯುತ್ ಸಂಪರ್ಕವನ್ನು ಪಡೆಯಲು ನಿರಾಕ್ಷೇಪಣಾ ಪತ್ರ ನೀಡಲು ಕಾನೂನು ರೀತ್ಯ ಸೂಕ್ತ ಕ್ರಮ ಜರುಗಿಸುವಂತೆ ಸರ್ಕಾರಕ್ಕೆ ಈ ಮೂಲಕ ಶಿಫಾರಸ್ಸು ಮಾಡಲಾಗಿದೆ.** ಈ ಬಗ್ಗೆ ಎರಡು ತಿಂಗಳೊಳಗೆ ಕ್ರಮ ಕೈಗೊಂಡು, ತದನಂತರ ಸಕ್ಷಮ ಪ್ರಾಧಿಕಾರವು ಈ ಸಂಸ್ಥೆಗೆ ಅಲ್ಲಿಂದ ಒಂದು ತಿಂಗಳಯೊಳಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(2)ರಡಿಯಲ್ಲಿ ಕೈಗೊಳ್ಳಲಾದ ಕ್ರಮದ ಬಗ್ಗೆ ವರದಿ ಸಲ್ಲಿಸುವುದು.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

6/3/17

**(ನ್ಯಾಯಮೂರ್ತಿ ಸುಭಾಷ್ ಬಿ. ಆಡಿ)**
**ಉಪಲೋಕಾಯುಕ್ತರು,**
**ಕರ್ನಾಟಕ ರಾಜ್ಯ,**
**ಬೆಂಗಳೂರು.** 03/03/17